ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಅನುದಾನಿತ ಶಾಲಾ ಕಾಲೇಜುಗಳಲ್ಲಿನ ಖಾಲಿ ಹುದ್ದೆಗಳ ಭರ್ತಿ ಬಗ್ಗೆ

ಶ್ರೀ ಕೆ. ಟಿ. ಶ್ರೀಕಂಠೇಗೌಡ(ಪದವೀಧರ ಕ್ಷೇತ್ರ) -

106 (41) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದ ಖಾಸಗಿ ಅನುದಾನಿತ-ಶಾಲಾ ಕಾಲೇಜುಗಳಲ್ಲಿನ ಅನುದಾನ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇತ್ತೀಚೆಗೆ ಆರ್ಥಿಕ ಇಲಾಖೆಯ ಎಲ್ಲಾ ಅನುದಾನಿತ ಹುದ್ದೆಗಳ ನೇಮಕಾತಿಯನ್ನು ತಡೆಹಿಡಿಯುವಂತೆ ಆದೇಶ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಈ ಆದೇಶವನ್ನು ವಾಪಸ್ಸು ಪಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಯಾವ ಕಾಲಮಿತಿಯೊಳಗೆ ಈ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುವುದು? (ವಿವರ ನೀಡುವುದು)